# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಮಳ್ಳೂರು ಗ್ರಾಮ ಪಂಚಾಯಿತಿ, ಹಾಲಿ ಕಾರ್ಯದರ್ಶಿ ದೇವರಮಳೂರು ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/469/ಗ್ರಾಪಂಕಾ/2016, ದಿನಾಂಕ: 26-09-2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ.ಸಂಖ್ಯೆ: UPLOK-2/DE/422/2016/ARE-08, ದಿನಾಂಕ: 28-02-2018.
3. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/469/ಗ್ರಾಪಂಕಾ/2016, ದಿನಾಂಕ: 17-03-2018.
4. ಶ್ರೀ ಕೃಷ್ಣಪ್ಪ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 03-04-2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಮಳ್ಳೂರು ಗ್ರಾಮ ಪಂಚಾಯಿತಿ, ಹಾಲಿ ಕಾರ್ಯದರ್ಶಿ ದೇವರಮಳೂರು ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-08, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11(3)ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

The charge alleged against the DGO was that, while DGO was working as Secretary in Mallur Grama Panchayath, failed to apprise the members of the Gram Panchayath about impermissiblity in law to convert civic amenity site as residential sites and failed to bring it to the notice of Taluk Panchayath and Zilla Panchayath about impermissible resolution passed by Gram Panchayath to convert the civic amenity site into residential sites and thereby, the DGO have failed to maintain absolute integrity and devotion to the duty, the act of which is unbecoming of Government servants and thereby have committed misconduct under Rule 3(1)(i) to (iii) of KCS (Conduct) Rules, 1966".

ವಿಚಾರಣಾಧಿಕಾರಿಯವರು, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಮಳ್ಳೂರು ಗ್ರಾಮ ಪಂಚಾಯಿತಿ, ಹಾಲಿ ಕಾರ್ಯದರ್ಶಿ ದೇವರಮಳೂರು ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ಸದರಿಯವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ **"denial of 3 annual increments for a period of 3 years without cumulative effect in exercise under Rule 8(iii) of KCS(CCA) Rules,1957"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಆರೋಪಿತ ನೌಕರರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟಿಸನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸಿಗೆ ಆಪಾದಿತ ನೌಕರರು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

1) ದೂರುದಾರರು ತಮ್ಮ ದೂರಿನಲ್ಲಿ ತಿಳಿಸಿರುವಂತೆ ಉದ್ಯಾನವನ ಅಥವಾ ಆಟದ ಮೈದಾನಕ್ಕಾಗಿ ಸ್ಥಳವನ್ನು ಮೀಸಲಿರಿಸಿರುವುದಿಲ್ಲ. ಗ್ರಾಮ ಪಂಚಾಯಿತಿಯ ಈ. ನಿರ್ಣಯಕ್ಕೆ ತಾಲ್ಲೂಕು ಪಂಚಾಯಿತಿ ಸಹಾ ಅನುಮೋದನೆ ನೀಡಿರುತ್ತದೆ.. ಆ ಸಮಯದಲ್ಲಿ ಹಳ್ಳಿಗಳಿಗೆ ಆಟದ ಮೈದಾನ ಅಥವಾ ಉದ್ಯಾನವನದ ಅವಶ್ಯಕತೆಯ ಬಗ್ಗೆ ಬೇಡಿಕೆ ಇರದ ಕಾರಣ ಮಳ್ಳೂರು ಗ್ರಾಮದ **ಒಟ್ಟು** ಜನ **ಸಂಖ್ಯೆಯ 1/3 ಭಾಗ ಪರಿಶಿಷ್ಟ ಜಾತಿ/ಪರಿಶಿಷ್ಟ** ವರ್ಗದವರು ಇದ್ದು, ಗ್ರಾಮ ಪಂಚಾಯಿತಿಯು ಲಭ್ಯವಿದ್ದ ಖಾಲಿ ಜಾಗದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡಲಾಗಿದೆ. ಇದರಲ್ಲಿ ಯಾವುದೇ ದುರುದ್ದೇಶ ಇರುವುದಿಲ್ಲ.
2) ಮಾನ್ಯ ಲೋಕಾಯುಕ್ತ ತನಿಖಾಧಿಕಾರಿಗಳು 2005–06 ರಲ್ಲಿ ಗ್ರಾಮ ಪಂಚಾಯಿತಿಯು ಯಾವ ಉದ್ದೇಶದಿಂದ ನಿರ್ಣಯ ಕೈಗೊಂಡಿದೆ ಹಾಗೂ ಇದರಲ್ಲಿ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಯ ಪಾತ್ರವೇನು ಎಂಬ ಬಗ್ಗೆ ವಿವರವಾಗಿ ವಿಚಾರಣೆ ನಡೆಸದೇ ಹಾಗೂ ನನ್ನ ಹೇಳಿಕೆಯ ವಾಸ್ತವಾಂಶಗಳನ್ನು ಅರ್ಥೈಸದೇ ತಪ್ಪು ನಿರ್ಧಾರ ಕೈಗೊಂಡಿರುತ್ತಾರೆ. ಮೇಲೆ ತಿಳಿಸಿರುವ ವಿವರಗಳ ಹಿನ್ನೆಲೆಯಲ್ಲಿ ನನ್ನನ್ನು ಆರೋಪ ಮುಕ್ತಗೊಳಿಸುವಂತೆ ಪ್ರಾರ್ಥಿಸುತ್ತಾರೆ.

ಆಪಾದಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸ್‌ನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿವೆ. ಆರೋಪಿತ ನೌಕರರು ನೀಡಿರುವ ಮನವಿಯಲ್ಲಿರುವ ವಿವರಣೆಯನ್ನು ಪರಿಶೀಲಿಸಲಾಗಿದೆ. ಈ ವಿವರಣೆಯನ್ನು ಸ್ಥಾಪಿತ ನಿಯಮಾವಳಿಗಳ ಪ್ರಕಾರ ಒಪ್ಪಲು ಸಾಧ್ಯವಿರುವುದಿಲ್ಲ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತುಪಡಿಸಲು ಪ್ರಮುಖವಾಗಿ ವರದಿಯ ಕಂಡಿಕೆಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

> In the cross examination, DW-1 (DGO) denies that an extent of 16 guntas was reserved for civic amenities. At para 2 of his cross, he says that the 16 guntas was reserved for allotting it to very poor persons. But, in the written statement, Defence statement and written brief, DGO contends that in the year 2006-07, 200 sites were distributed as per Government order and the remaining 16 guntas was reserved for civic amenities, Ambedkar Bhavan and Anganwadi Centers. Further, he states that after earmarking land for Ambedkar Bhavan and Anganwadi Centers.Further, he statesthat after earmarking land for Ambedkar Bhavan

and Anganwadi centers the remaining land was reserved for allotting sites to very poor site-less persons. He further states that here was not order to reserve the land for civic amenities and no land has been identified for such purpose. DGO has given inconsistent statements. At one breath he says that it was reserved for public purpose and at another breath he says that it was not reserved for civic amenities. His own notice Ex.P-16 shows that he has mentioned the said area as reserved area for public purpose. Further, in his comments dated: 23-03-2009, he has suppressed even the resolution dated: 18-01-2017 of the Gram Panchayath.

ಸರ್ಕಾರವು ಎಲ್ಲಾ ಅಂಶಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಮಳ್ಳೂರು ಗ್ರಾಮ ಪಂಚಾಯಿತಿ, ಹಾಲಿ ಕಾರ್ಯದರ್ಶಿ ದೇವರಮಳೂರು ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ **"denial of 3 annual increments for a period of 3 years without cumulative effect in exercise under Rule 8(iii) of KCS(CCA) Rules, 1957 "** ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/469/ಗ್ರಾಪಂಕಾ/2016,**
**ಬೆಂಗಳೂರು, ದಿನಾಂಕ: -07-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಮಳ್ಳೂರು ಗ್ರಾಮ ಪಂಚಾಯಿತಿ, ಹಾಲಿ ಕಾರ್ಯದರ್ಶಿ ದೇವರಮಳೂರು ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ **"denial of 3 annual increments for a period of 3 years without cumulative effect in exercise under Rule 8(iii) of KCS(CCA) Rules,1957"** ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
18/7/18
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ-2, ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಶಿಡ್ಲಘಟ್ಟ, ಚಿಕ್ಕಬಳ್ಳಾಪುರ ಜಿಲ್ಲೆ.
7. ಶ್ರೀ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಮಳ್ಳೂರು ಗ್ರಾಮ ಪಂಚಾಯಿತಿ, ಹಾಲಿ ಕಾರ್ಯದರ್ಶಿ ದೇವರಮಳೂರು ಗ್ರಾಮ ಪಂಚಾಯಿತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.